ಶ್ರೀ ಡಿ. ಮಂಜುನಾಥ್ (ಅರಣ್ಯ ಸಚಿವರು) : ಸಾರ್ ಇದರ ಬಗ್ಗೆ ಸಾಕಷ್ಟು ಚರ್ಚೆಯಾಗಿದೆ. ಇದು ಕೋರ್ಟಿಗೂ ಹೋಗಿತ್ತು. ಇದನ್ನು ಬಾಯಿಮಾತಿನ ಮತಕ್ಕೆ ಹಾಕಿಬಿಡಿ.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ : ಇದರಲ್ಲೇನು ಸಾಮಾಜಿಕ ನ್ಯಾಯ ಇದೆಯೇನು? ಬೇರೆ ಕಾನೂನುಗಳಲ್ಲಿ ಕ್ಯಾಟಗರಿವೈಸ್ ಏನಾದರೂ ಇದೆ. ಇದರಲ್ಲಿ ಸುಮ್ಮೋಮೊಟೊ ನೂರು ಜನರಿಗೆ ನಾಮಿನೇಷನ್!

ಶ್ರೀ ಡಿ. ಮಂಜುನಾಥ್ : ಎಲ್ಲಾ ಕಡೆ ನಾಮಿನೇಷನ್‌ಗಳಲ್ಲಿ ಹಿಂದುಳಿದ ವರ್ಗ, ಪರಿಶಿಷ್ಟ ಜಾತಿ ಪಂಗಡದವರನ್ನು ನಾಮಿನೇಟ್ ಮಾಡಿದ್ದಾರೆ.

ಶ್ರೀ ಕೆ.ಎಸ್. ಈಶ್ವರಪ್ಪ : ಅವರನ್ನು ಹಾಕಿಬಿಟ್ಟರೆ ಆಗಿ ಹೋಯಿತಾ? ಹಾಗಾದರೆ ಚುನಾವಣೆ ಮಾಡಬೇಡಿ ಬರೀ ಎಸ್‌ಸಿಎಸ್‌ಟಿ ತುಂಬಿಬಿಡಿರಿ.

ಗೊಂದಲ

ಅಧ್ಯಕ್ಷರು : ನಾನು ಪ್ರೊಸೀಜರ್ ಅನುಸರಿಸುತ್ತೇನೆ.

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಹೆಚ್. ನಾಗಪ್ಪ (ಕೃಷಿ ಮಾರುಕಟ್ಟೆ ರಾಜ್ಯ ಸಚಿವರು) : ಅಧ್ಯಕ್ಷರೇ, "1998ರ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ ನಿಯಂತ್ರಣ, (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ"

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ : ತಾವು ದಯವಿಟ್ಟು ಮತಕ್ಕೆ ಹಾಕಿ.

ಅಧ್ಯಕ್ಷರು : ಆಗಬಹುದು, ಬೆಲ್ ಹಾಕಿರಿ.

ಅಧ್ಯಕ್ಷರು : ಈಗ ಬೆಲ್ಲನ್ನು ನಿಲ್ಲಿಸಲಾಗಿದೆ. ಪ್ರಸ್ತಾವವನ್ನು ಮತಕ್ಕೆ ಹಾಕುತ್ತೇನೆ.

ಪ್ರಸ್ತಾವ ಏನೆಂದರೆ :- "1998ರ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ ನಿಯಂತ್ರಣ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಅಧ್ಯಕ್ಷರು : ವಿಭಜಿಸಿದಾಗ ಫಲಿತಾಂಶ ಹೀಗಿದೆ.

ಹೌದು 57

ಇಲ್ಲ 36

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಶ್ರೀ ವಸಂತ ಬಂಗೇರ (ಸರ್ಕಾರಿ ಮುಖ್ಯ ಸಚೇತಕರು) : ಮಾನ್ಯ ಅಧ್ಯಕ್ಷರೆ, ಎಷ್ಟು ಮಂದಿ ಸದಸ್ಯರು ತಟಸ್ಥರಾಗಿದಾರೆಂಬುದನು ತಿಳಿಸಬೇಕೆಂದು ತಮ್ಮಲಿ ಮನವಿ ಮಾಡಿಕೊಳ್ಳುತ್ತೇನೆ.

ಅಧ್ಯಕ್ಷರು : ಕೆ.ಎಸ್. ಬೀಳಗಿಯವರೊಬ್ಬರು ಮಾತ್ರ ತಟಸ್ಥರು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3

ಅಧ್ಯಕ್ಷರು : 'ಖಂಡ 2 ಮತ್ತು 3 ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ'

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3 ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಹೆಚ್. ನಾಗಪ್ಪ (ಕೃಷಿ ಮಾರುಕಟ್ಟೆ ರಾಜ್ಯ ಸಚಿವರು) : ಮಾನ್ಯ ಅಧ್ಯಕ್ಷರೆ, 1998ರ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ ನಿಯಂತ್ರಣ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, '1998ರ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ ನಿಯಂತ್ರಣ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಕರ್ನಾಟಕ ಒಳನಾಡು ಮೀನುಗಾರಿಕೆ (ಸಂರಕ್ಷಣಾ, ಅಭಿವೃದ್ಧಿ ಮತ್ತು ನಿಯಂತ್ರಣ) ವಿಧೇಯಕ, 1996

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಕೆ. ಜಯಪ್ರಕಾಶ್ ಹೆಗಡೆ (ಬಂದರು ಮತ್ತು ಮೀನುಗಾರಿಕೆ ರಾಜ್ಯ ಸಚಿವರು) : ಮಾನ್ಯ ಅಧ್ಯಕ್ಷರೆ, "1996ರ ಕರ್ನಾಟಕ ಒಳನಾಡು ಮೀನುಗಾರಿಕೆ (ಸಂರಕ್ಷಣಾ, ಅಭಿವೃದ್ಧಿ ಮತ್ತು ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ"